# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 520
2. ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 11.03.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿಗೆ 2ನೇ ವಿಮಾನನಿಲ್ದಾಣ ಸಂಬಂಧ ಸ್ಥಳಗಳ ಆಯ್ಕೆ/ಗುರುತಿಸುವಿಕೆ ಕಾರ್ಯ ನಡೆದಿದೆಯೇ; | ಬೆಂಗಳೂರಿನಲ್ಲಿ 2ನೇ ವಿಮಾನನಿಲ್ದಾಣವನ್ನು ಅಭಿವೃದ್ಧಿಪಡಿಸಲು ಸ್ಥಳಗಳ ಆಯ್ಕೆ/ಗುರುತಿಸುವಿಕೆ ಕಾರ್ಯಗಳು ನಡೆದಿದೆ. |
| (ಆ) | ಇದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಆಯ್ಕೆ ಮಾಡಲಾಗಿದೆ ವಿವರ ನೀಡುವುದು; ಈ ಸ್ಥಳಗಳನ್ನು ಆಯ್ಕೆ ಮಾಡುವ ಸಂಧರ್ಭದಲ್ಲಿ ಯಾವ ಯಾವ ಅಂಶಗಳನ್ನು ಆಧರಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು) | ರಾಜ್ಯ ಸರ್ಕಾರವು ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಚೂಡಹಳ್ಳಿ ಗ್ರಾಮದ ಹತ್ತಿರ ಮತ್ತು ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಸೋಮನಹಳ್ಳಿ ಗ್ರಾಮದ ಹತ್ತಿರ ಹಾಗೂ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನ ನೆಲಮಂಗಲದ ಹತ್ತಿರ ಒಟ್ಟಾರೆ ಮೂರು ಸ್ಥಳಗಳನ್ನು ಗುರುತಿಸಲಾಗಿದೆ.<br><br>ಸ್ಥಳಗಳನ್ನು ಆಯ್ಕೆ ಮಾಡುವ ಸಮಯದಲ್ಲಿ ಈ ಕೆಳಕಂಡ 4 ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಸಂಭಾವ್ಯ ಸ್ಥಳಗಳನ್ನು ಗುರುತಿಸಲಾಗಿದೆ:<br><br>1. ತಾಂತ್ರಿಕ ಸಂಭಾವ್ಯತೆ – ವಿಮಾನನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು, ಗುಡ್ಡಗಾಡು ಪ್ರದೇಶ, ಎತ್ತರದ ರಚನೆಗಳು.<br>2. ಸಂಪರ್ಕ-ರಸ್ತೆ (NH & SH), ರೈಲು ಮತ್ತು ಮೆಟ್ರೋ ಸಂಪರ್ಕ.<br>3. ಬಳಕೆದಾರರಿಗೆ ಉದ್ದೇಶಿತ ವಿಮಾನನಿಲ್ದಾಣವನ್ನು ತಲುಪುವ ದೂರ ಮತ್ತು ಸಮಯ.<br>4. ಸ್ಥಳ ವೈಶಿಷ್ಟ್ಯತೆಗಳು – ವಿಸ್ತಾರವಾದ ಭೂಪ್ರದೇಶ, ಜಮೀನಿನ ಪ್ರಕಾರಗಳು, ಕಡಿಮೆ ಜನಸಾಂದ್ರತೆಯ ಪ್ರದೇಶ ಮತ್ತು ಜಲಸಂಪನ್ಮೂಲದ ಲಭ್ಯತೆ |
| (ಇ) | ಸ್ಥಳಗಳ ಅನುಮೋದನೆ ಕೋರಿ ಕೇಂದ್ರ ಸರ್ಕಾರಕ್ಕೆ (Airports Authority of India)ಗೆ ಶಿಫಾರಸು ಮಾಡಲಾಗಿದೆಯೇ; | ಹೌದು, ದಿನಾಂಕ: 05.03.2025ರ ಪತ್ರದಲ್ಲಿ Secretary, Ministry of Civil Aviation, Government of India ಇವರಿಗೆ Pre-feasibility study ಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |
| (ಈ) | ಇದ್ದಲ್ಲಿ, ಶಿಫಾರಸ್ಸು ಮಾಡಲಾದ ಪ್ರಸ್ತಾವನೆಯಲ್ಲಿ ಹೆಸರಿಸಲಾಗಿರುವ ಸ್ಥಳಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯ ಸರ್ಕಾರವು ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಚೂಡಹಳ್ಳಿ ಗ್ರಾಮದ ಹತ್ತಿರ ಮತ್ತು ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಸೋಮನಹಳ್ಳಿ ಗ್ರಾಮದ ಹತ್ತಿರ ಹಾಗೂ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನ ನೆಲಮಂಗಲದ ಹತ್ತಿರ ಒಟ್ಟಾರೆ ಮೂರು ಸ್ಥಳಗಳನ್ನು ಗುರುತಿಸಲಾಗಿದೆ. |

ಸಂಖ್ಯೆ: ಮೂಅಇ 44 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು